**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬ್ಯಾಡಗಿ.**

**ಓ.ಎಸ್.ನಂ. 36/2020.**

**ಡಿ ಡಬ್ಲ್ಯೂಃ 3**

**ದಿನಾಂಕಃ 08-06-2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಪಾಟೀ ಸವಾಲುಃ ಶ್ರೀ ಎಫ್.ಎಂ.ಎಂ. ವಕೀಲರಿಂದಃ**

ಸರ್ವೆ ನಂ.26/1 ನ್ನು ಈ ದಾವೆಯಲ್ಲಿ ಸೇರಿಸಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಅದು ನಿಡಿ-8, 9 ಎಂದರೆ ಗೊತ್ತಿಲ್ಲ. ದಾವಾ ಆಸ್ತಿಗಳು ನಮ್ಮ ಮತ್ತು ವಾದಿಯರ ಏಕತ್ರ ಘರಾಣೆದ ಆಸ್ತಿಗಳು ಎಂದರೆ ಸರಿಯಲ್ಲ. ನಮ್ಮ ಕುಟುಂಬದ ಆಸ್ತಿಗಳು ನಮ್ಮ ಅಜ್ಜ ಹಾಗೂ ನಮ್ಮ ತಂದೆಯ ಕಾಲದಲ್ಲಿ ವಾಟ್ನಿ ಆಗಿಲ್ಲ ಎಂದರೆ ಸರಿಯಲ್ಲ. ನಮ್ಮ ಅಜ್ಜ ಚಿಕ್ಕನಗೌಡ ತೀರಿಕೊಂಡ ನಂತರ ನನ್ನ ತಂದೆ ಹಿರಿಯ ಮಗನಾದ್ದರಿಂದ ಅವರ ಹೆಸರಿಗೆ ಖಾತಾ ಬದಲಾವಣೆ ಆಗಿದೆ ಎಂದರೆ ಗೊತ್ತಿಲ್ಲ. ನನ್ನ ತಂದೆಯ ಮರಣದ ನಂತರ ನಾನು ಮತ್ತು ನನ್ನ ಮಗ ಎಲ್ಲ ಆಸ್ತಿಗಳಿಗೆ ಖಾತಾ ಬದಲಾವಣೆ ಮಾಡಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ಆ ಪ್ರಕಾರ ಡ-568 ದಾಖಲಾಗಿದೆ ಎಂದರೆ ಸರಿ. ವಾದಿಗೆ ದಾವಾ ಆಸ್ತಿಯಲ್ಲಿ ½ ಹಿಸ್ಸೆ ಇದೆ ಎಂದರೆ ಸರಿಯಲ್ಲ. ಅವಳಿಗೆ ಹಿಸ್ಸೆ ಕೊಡಬಾರದು ಎನ್ನುವ ಉದ್ದೇಶದಿಂದ ವಾಟ್ನಿ ಆಗಿದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲ ಸಂಗತಿಗಳು ಸಂಪೂರ್ಣ ಸುಳ್ಳು ಇವೆ ಎಂದರೆ ಸರಿಯಲ್ಲ. 1970 ನೇ ಇಸವಿಯಲ್ಲಿ ವಾಟ್ನಿಯಾಗಿದೆ ಎಂದು ಯಾವುದೇ ನೊಂದಾದ ದಾಖಲೆ ಹಾಜರು ಪಡಿಸಿಲ್ಲ ಎಂದರೆ ಮಾಹಿತಿ ಇಲ್ಲ ಎಂದು ಹೇಳುತ್ತಾರೆ. ಸರ್ವೆ ನಂ.10/1, 10/3 ನ್ನು ಏಕತ್ರ ಘರಾಣೆದ ಆಸ್ತಿಯಿಂದ ಬಂದ ಆದಾಯದಿಂದ ಖರೀದಿ ಮಾಡಲಾಗಿದೆ ಎಂದರೆ ಸರಿಯಲ್ಲ. ಶಿವನಗೌಡ ನನ್ನ ಮಗನ ಹೆಸರಿನಲ್ಲಿ ಯಾವುದೇ ದಾನಪತ್ರ ಮಾಡಿಕೊಟ್ಟಿಲ್ಲ ಎಂದರೆ ಸರಿಯಲ್ಲ. ಶಿವನಗೌಡನಿಗೆ ಪಾರ್ಶುವಾಯು ಇತ್ತು ಆ ಕಾರಣದಿಂದ ಸ್ವಂತ ತಿಳುವಳಿಕೆಯಿಂದ ದಾನ ಪತ್ರ ಮಾಡಿಕೊಟ್ಟಿಲ್ಲ ಎಂದರೆ ಸರಿಯಲ್ಲ.

ಶಿವನಗೌಡನ ಪರವಾಗಿ ನಾನೇ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ವಾದಿಯ ಹಿಸ್ಸೆಯನ್ನು ನಷ್ಟ ಪಡಿಸುವ ಉದ್ದೇಶದಿಂದ ದಾನ ಪತ್ರ ಮಾಡಲಾಗಿದೆ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು**).

ಓ.ಹೇ.ಕೆ.ಸರಿ ಇದೆ.

**Sd/-**

ಹಿರಿಯ ದಿವಾಣಿ ನ್ಯಾಯಾಧೀಶರು

ಹಾಗೂ ಜೆ.ಎಂ.ಎಫ್.ಸಿ., ನ್ಯಾಯಾಲಯ ಬ್ಯಾಡಗಿ.